## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2018–19ನೇ ಸಾಲಿಗೆ ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕಟ್ಟಡ ನಿರ್ಮಾಣ ಕಾಮಗಾರಿಗಾಗಿ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ. ಇವರ ಪತ್ರ ಸಂಖ್ಯೆ:ಆರ್‌ಡಿಪಿಆರ್‌ಯು 03 ಹಣಕಾ 2017/1389, ದಿನಾಂಕ:19-12-2018.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 44 ಜಿಪಸ 2015(ಪಿ-2), ದಿನಾಂಕ:14-03-2017.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 413 ಜಿಪಸ 2017, ದಿನಾಂಕ:09-01-2018.

ಪ್ರಸ್ತಾವನೆ:

2018-19ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ:4515-00-101-0-01-132 (ಬಂಡವಾಳ ವೆಚ್ಚ) ಯಡಿಯಲ್ಲಿ ರೂ.10.00ಕೋಟಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಕಟ್ಟಡ ನಿರ್ಮಾಣಕ್ಕಾಗಿ ಒದಗಿಸಲಾಗಿದೆ.

ಮೇಲೆ ಓದಲಾದ ಉಲ್ಲೇಖ (1)ರ ಪ್ರಸ್ತಾವನೆಯಲ್ಲಿ, 2018-19ನೇ ಸಾಲಿಗೆ ಒದಗಿಸಿರುವ ರೂ.10.00ಕೋಟಿಗಳ ಅನುದಾನದ ಹಾಗೂ ವಿಶ್ವವಿದ್ಯಾಲಯಕ್ಕೆ ಹಿಂದಿನ ಸಾಲುಗಳಲ್ಲಿ ಒದಗಿಸಲಾಗಿದ್ದ ಅನುದಾನ ರೂ.15.00ಕೋಟಿಗಳನ್ನು ಒಳಗೊಂಡು, ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್‌ನಲ್ಲಿ ಒಂದು ಶಾಲಾ ಕಟ್ಟಡ, ಬಾಲಕರ ವಸತಿ ನಿಲಯ, ಊಟದ ಹಾಲ್, ಶಬರಿಮತಿ ಆಶ್ರಮದ ಪ್ರತಿಕೃತಿ ಕಟ್ಟಡಗಳ ನಿರ್ಮಾಣಕ್ಕಾಗಿ ಒಟ್ಟಾರೆ ರೂ.22.40ಕೋಟಿಗಳ ವೆಚ್ಚದಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸುವುದಾಗಿ ತಿಳಿಸಿ, ಅದರಂತೆ 2018-19ನೇ ಸಾಲಿಗೆ ಒದಗಿಸಿರುವ ರೂ.10.00ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸುವಂತೆ ಕುಲಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಇವರು ತಮ್ಮ ಪತ್ರದಲ್ಲಿ ಕೋರಿರುತ್ತಾರೆ.

ಮೇಲೆ ಓದಲಾದ (2) ರ ಆದೇಶದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ಇಲ್ಲಿನ ಕಟ್ಟಡ ನಿರ್ಮಾಣಕ್ಕಾಗಿ ರೂ.5.00ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ ಹಾಗೂ ಮೇಲೆ ಓದಲಾದ (3) ರ ಆದೇಶದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ಇಲ್ಲಿನ ಕಟ್ಟಡ ನಿರ್ಮಾಣಕ್ಕಾಗಿ ರೂ.10.00ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

ಕುಲಸಚಿವರು, ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ, ಗದಗ ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ 2018-19ನೇ ಸಾಲಿನಲ್ಲಿ ಒದಗಿಸಿರುವ ರೂ.10.00ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 130 ಜಿಪಸ 2018, ಬೆಂಗಳೂರು, ದಿನಾಂಕ:08-02-2019.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, 2018-19ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ:4515-00-101-0-01-132(ಬಂಡವಾಳ ವೆಚ್ಚ) ರಡಿ ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕಟ್ಟಡ ಕಾಮಗಾರಿ ನಿರ್ಮಾಣಕ್ಕಾಗಿ ಒದಗಿಸಿರುವ ರೂ.10.00(ಹತ್ತು ಕೋಟಿ ಮಾತ್ರ)ಗಳ ಅನುದಾನವನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು

ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ಇಲ್ಲಿನ ಮುಂದುವರೆದ ಕಟ್ಟಡ ಕಾಮಗಾರಿಗಳ ನಿರ್ಮಾಣಕ್ಕಾಗಿ ಬಿಡುಗಡೆಗೊಳಿಸಿ ಆದೇಶಿಸಿದೆ.

ಸದರಿ ಅನುದಾನವನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ಇದರ ಬ್ಯಾಂಕ್ ಉಳಿತಾಯ ಸಂಖ್ಯೆ:36538494457 (ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗೌರ್ನಮೆಂಟ್ ಎಸ್ಟೇಟ್ ಬ್ರಾಂಚ್, ಗದಗ, IFSC Code: SBIN0011270, Branch Code:11270) (Recipient Code:1200736300) ಗೆ ಖಜಾನೆ-2 ಮೂಲಕ ಜಮೆ ಮಾಡಲು ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ್ ಶಾಖೆ ಇವರಿಗೆ ಅನುದಾನದ ಬಿಲ್ಲಿನ ಮೇಲೆ ರುಜು ಮಾಡಿ ಸೆಳೆಯಲು ಆದೇಶಿಸಿದೆ.

<u>ಕಾಮಗಾರಿಯನ್ನು ಕೈಗೊಳ್ಳಲು ವಿಧಿಸಿರುವ ಷರತ್ತುಗಳು:</u>

1. ಸದರಿ ಕಾಮಗಾರಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ(ಕೆ.ಟಿ.ಟಿ.ಪಿ) ಅಧಿನಿಯಮ, 1999 ಹಾಗೂ ನಿಯಮಗಳು, 2000 ಮತ್ತು ಇತ್ತೀಚಿನ ನಿಯಮಗಳನ್ನು ಅನುಸರಿಸಿ ಅನುಷ್ಠಾನಗೊಳಿಸುವುದು.
2. ಕಟ್ಟಡ ನಿರ್ಮಾಣ ಉದ್ದೇಶಕ್ಕಾಗಿ ಬಿಡುಗಡೆಗೊಳಿಸಿದ ಅನುದಾನವನ್ನು ಅನ್ಯ ಉದ್ದೇಶಕ್ಕಾಗಿ ವಿನಿಯೋಗಿಸತಕ್ಕದ್ದಲ್ಲ.
3. ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಸಮಂಜಸ ದರದಲ್ಲಿ ಉತ್ತಮ ಗುಣಮಟ್ಟದೊಂದಿಗೆ ಕೈಗೊಳ್ಳುವುದು.
4. ಕಟ್ಟಡ ನಿರ್ಮಾಣ ಕಾಮಗಾರಿಯನ್ನು ನಿಗದಿತ ಕಾಲಮಿತಿಯಲ್ಲಿ ನಿರ್ವಹಿಸಿ ಪೂರ್ಣಗೊಳಿಸುವುದು.
5. ಈಗಾಗಲೇ ಬಿಡುಗಡೆಗೊಳಿಸಿರುವ ರೂ.15.00ಕೋಟಿಗಳಿಗೆ ಉಪಯೋಗಿತಾ ಪ್ರಮಾಣ ಪತ್ರವನ್ನು ಕೂಡಲೇ ಸಲ್ಲಿಸುವುದು

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 477 ವೆಚ್ಚ-6/2018, ದಿನಾಂಕ: 06-02-2019 ರಲ್ಲಿ ಆರ್ಥಿಕ ಇಲಾಖೆಯು ನೀಡಿರುವ ಸಹಮತಿ ಹಾಗೂ ಆದೇಶ ಸಂಖ್ಯೆ:ಎಫ್‌ಡಿ 04 ಟಿಎಫ್‌ಪಿ 2018, ದಿನಾಂಕ:08-01-2019 ರಲ್ಲಿ ಆಯಾಯಾ ಇಲಾಖಾ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3. ಕುಲಸಚಿವರು, ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ.
4. ಜಿಲ್ಲಾಧಿಕಾರಿ, ಗದಗ ಜಿಲ್ಲೆ.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಗದಗ ಜಿಲ್ಲೆ.

6. ನಿರ್ದೇಶಕರು ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
7. ಉಪನಿರ್ದೇಶಕರು. ಟಿ.ಎಂ.ಎನ್.ಸಿ ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
8. ಉಪನಿರ್ದೇಶಕರು, ಜಿಲ್ಲಾ ಖಜಾನೆ, ಗದಗ.
9. ಹಣಕಾಸು ಅಧಿಕಾರಿ, ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
11. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.